ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಇಲ್ಲ

ಆ) ಈ ಯೋಜನೆಯಿಂದ ಪರಿಸರದ ಮೇಲಾಗುವ ಪರಿಣಾಮಗಳ ಕುರಿತು ಅಧ್ಯಯನವನ್ನು ಮಾಡಲು ನಾಗಪುರದ ನ್ಯಾಷನಲ್ ಎನ್ವಿರಾನ್ಮೆಂಟಲ್ ಇಂಜಿನಿಯರಿಂಗ್ ರೀಸರ್ಚ್ ಇನ್‌ಸ್ಟಿಟ್ಯೂಟ್ ಇವರಿಗೆ ಒಪ್ಪಿಸಲು ಕರ್ನಾಟಕ ಸರ್ಕಾರವು ಅನುಮೋದನೆಯನ್ನು ನೀಡಿದೆ ಈ ಸಂಸ್ಥೆಯ ಅಧ್ಯಯನದ ವರದಿಯನ್ನು ಆಧರಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು

918(1220) ಶ್ರೀ ಮುನಿಯಪ್ಪ ಎನ್ ಎಂ (ಚಿಕ್ಕಬಳ್ಳಾಪುರ) ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರದಲ್ಲಿ ಸಾರಿಗೆ ಸಂಸ್ಥೆಯ ಜಿಲ್ಲಾ ವಿಭಾಗೀಯ ಕಛೇರಿ ಪ್ರಾರಂಭವಾಗಿದ್ದರೂ ವ್ಯವಸ್ಥಿತವಾದ ಬಸ್ - ನಿಲ್ದಾಣ ನಿರ್ಮಾಣವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬಸ್ ನಿಲ್ದಾಣಕ್ಕಾಗಿ ನಗರದ ಹೃದಯ ಭಾಗದಲ್ಲಿ ಇಲಾಖಾ ಸ್ವಾಧೀನದಲ್ಲಿ ಇರುವ 5 20 ಎಕರೆ ಜಮೀನಿನಲ್ಲಿ ನಮತಟ್ಟು ಮಾಡಿ ಕಾಮಗಾರಿಯನ್ನು ಸ್ಥಗಿತಗೊಳಿಸಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ,

ಇ) ಹಾಗಿದ್ದಲ್ಲಿ, ಬಸ್ ನಿಲ್ದಾಣ ನಿರ್ಮಾಣ ಮಾಡಿ ಸಾರ್ವಜನಿಕರ ಅನುಕೂಲಕ್ಕಾಗಿ ವ್ಯವಸ್ಥೆ ಮಾಡಲು ಸರ್ಕಾರ ಶೀಘ್ರ ಕ್ರಮ ಕೈಗೊಳ್ಳುವುದೇ?

ಶ್ರೀ ಎನ್ ಚೆಲುವರಾಯಸ್ವಾಮಿ (ಸಾರಿಗೆ ಸಚಿವರು)

ಅ) ಬಂದಿದೆ

ಆ) ಬಂದಿದೆ

ಇ) ಚಿಕ್ಕಬಳ್ಳಾಮರ ಬಸ್ ನಿಲ್ದಾಣದ ಸ್ಥಳದ ಬಗ್ಗೆ ಸ್ಥಳೀಯ ಸಾರ್ವಜನಿಕರಲ್ಲಿ ಹಾಲಿ ಇರುವ ಬಸ್ ನಿಲ್ದಾಣವನ್ನು ಅಭಿವೃದ್ಧಿಪಡಿಸಬೇಕೆ ಅಥವಾ ರಾಷ್ಟ್ರೀಯ ಹೆದ್ದಾರಿ ಸಮೀಪದಲ್ಲಿ ಬಸ್ ನಿಲ್ದಾಣ ನಿರ್ಮಿಸಬೇಕೆ ಎಂಬುದರ ಬಗ್ಗೆ ಭಿನ್ನಾಭಿಪ್ರಾಯಗಳಿಸಿರುವುದರಿಂದ ಈ ವಿಷಯದ ಬಗ್ಗೆ ಚರ್ಚಿಸಿ ತೀರ್ಮಾನ ತೆಗೆದುಕೊಂಡು ಮುಂದಿನ ಕ್ರಮ ಕೈಗೊಳ್ಳಲಾಗುವುದು

919(1170) ಶ್ರೀ ನಾಗರಾಜು ಎಂ ಟಿ ಬಿ (ಹೊಸಕೋಟೆ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಪೂರ್ವ ತಾಲ್ಲೂಕು ಬಿಡದಹಳ್ಳಿ ಹೋಬಳಿ, ಮಂಡೂರು ಗ್ರಾಮದ ಹತ್ತಿರ ಬೈವಾಸ್ ರಸ್ತೆ ನಿರ್ಮಾಣಕ್ಕೆ ಬಿಎಂಆರ್‌ಡಿಎ ವತಿಯಿಂದ

ಭೂಸ್ವಾಧೀನ ಪ್ರಕ್ರಿಯೆಗೆ ಪೂರ್ವಭಾವಿ ಸಮೀಕ್ಷೆ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಈ ಬೈಪಾಸ್ ರಸ್ತೆ ನಿರ್ಮಾಣದ ಅವಶ್ಯಕತೆ ಇದೆಯೇ,

ಇ) ಅವಶ್ಯಕತೆ ಇದ್ದಲ್ಲಿ, ರೈತರ ಫಲವತ್ತಾದ ಮತ್ತು ಅಭಿವೃದ್ಧಿಪಡಿಸಿ ತೋಟಗಾರಿಕೆ ಬೆಳೆಗಳನ್ನು ಬೆಳೆಯುತ್ತಿರುವ ಜಮೀನುಗಳಲ್ಲಿ ರಸ್ತೆ ನಿರ್ಮಾಣ ಮಾಡುವ ಉದ್ದೇಶ ಸರಿಯೇ,

ಈ) ಹಾಲಿ ಹಿಂದಿನಿಂದಲೂ ಹಳೇ ಮದ್ರಾಸ್ ರಸ್ತೆ (ಎನ್ ಹೆಚ್ 4) ಯಿಂದ ಬೂದಿಗೆರೆಗೆ 100 ಅಡಿ ಅಗಲದ ರಸ್ತೆಯಿದ್ದು, ಪಕ್ಕದ ಸರ್ಕಾರಿ ಜಮೀನಿನ ಸರ್ವೆ ನಂ 115, 116, 128 ಇವುಗಳನ್ನು ಉಪಯೋಗಿಸಿ ರಸ್ತೆ ಅಗಲೀಕರಣ ಮಾಡಿದಲ್ಲಿ ದಲಿತ ರೈತರ ಜಮೀನನ್ನು ಉಳಿಸಿ ದಂತಾಗುವುದಿಲ್ಲವೆ,

ಉ) ರಾಷ್ಟ್ರೀಯ ಹೆದ್ದಾರಿ–4 ರಿಂದ ಮಂಜೂರು ಮಾರ್ಗವಾಗಿ ಬೂದಿಗೆರೆಗೆ 3 ಅಡಿ ಇರುವ ರಸ್ತೆಯನ್ನು ಅಭಿವೃದ್ಧಿಪಡಿಸಲು ಈಗಾಗಲೇ ಕಾಮಗಾರಿ ಪ್ರಗತಿಯಲ್ಲಿರುವಂತಹ ಸಂದರ್ಭದಲ್ಲಿ ಬಿ ಎಂ ಆರ್ ಡಿ ಎ ವತಿಯಿಂದ ಫಲವತ್ತಾದ ದಲಿತ ರೈತರ ತೋಟಗಳಲ್ಲಿ 300 ಅಡಿಗಳ ಬೇರೆ ರಸ್ತೆ ಮಾಡುವ ಅವಶ್ಯಕತೆ ಏನಿದೆ?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮುಖ್ಯಮಂತ್ರಿಗಳು)

ಅ) ಬಂದಿದೆ

ಆ) ಹೌದು

ಇ) ಮೇಲ್ಕಂಡ ರಸ್ತೆಯ ಪಂಕ್ತೀಕರಣವನ್ನು ತಾಂತ್ರಿಕ ದೃಷ್ಟಿಯಿಂದ ನಿಗದಿ ಪಡಿಸಲಾಗಿದೆ

ಈ) ಪ್ರಸ್ತಾವಿಕ ವರ್ತುಲ ರಸ್ತೆಯನ್ನು ಎಲ್ಲಾ ತರಹದ ತಾಂತ್ರಿಕ ಅಂಶಗಳ ಹಿನ್ನೆಲೆಯಲ್ಲಿ ಪರಿಶೀಲಿಸಲಾಗಿದ್ದು, ಈಗ ಅಂತಿಮಗೊಳಿಸಿರುವ ಪಂಕ್ತೀಕರಣವು ಸೂಕ್ತವಾಗಿದೆ

ಉ) ಈ ಪ್ರಸ್ತಾವಿತ ವರ್ತುಲ ರಸ್ತೆಯ 180 ಕಿ ಮೀ/ಗಂಟೆಯ ಅತಿ ವೇಗದ 8 ಪಥದ ರಸ್ತೆಯಾಗಿದ್ದು, ನದರಿ ರಸ್ತೆಯ ಒಟ್ಟು ಅಗಲ 90 ಮೀಟರ್‌ಗಳಲ್ಲಿ ಪ್ರತ್ಯೇಕ ರೈಲು ಹಳಿ ನಿರ್ಮಿಸಲು ಅವಕಾಶ ಕಲ್ಪಿಸಲಾಗಿದೆ ಮುಂಬರುವ ದಿನಗಳಲ್ಲಿ ವಾಹನ ಸಂಚಾರ ತೀವ್ರಗೊಳ್ಳಲಿದ್ದು, ಈ ರಸ್ತೆಯಿಂದ ನಗರದ ಸಮತೋಲಿತ ಬೆಳವಣಿಗೆಗೆ ನಹಕಾರಿಯಾಗಲಿದೆ ಈ ರಸ್ತೆಯ ನರ್ವೀಸ್ ರಸ್ತೆ ಹಾಗೂ ರಸ್ತೆ ಬದಿ ಸಾಲು ಮರಗಳನ್ನೊಳಗೊಂಡು ಅತ್ಯಂತ ಸುರಕ್ಷಿತ Multi-

Modal ಕಾರಿಡಾರ್ ಆಗಿ ಮುಂದೆ ಕಾರ್ಯ ನಿರ್ವಹಿಸಬೇಕಿದ್ದು, ಪ್ರಸ್ತಾಪಿತ ಅಗಲವು ಅವಶ್ಯವಾಗಿರುತ್ತದೆ

920(739) ಶ್ರೀ ನರಸಿಂಹಸ್ವಾಮಿ ಜೆ (ದೊಡ್ಡಬಳ್ಳಾಪುರ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅಕ್ರಮ ಮರಳು ಗಣಿಗಾರಿಕೆ ಅವ್ಯಾಹತವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಪ್ರತಿ ಲಾರಿಗಳು ಓವರ್ ಲೋಡ್ ಹಾಕಿಕೊಂಡು ಸಂಚರಿಸುವುದರಿಂದ ಗ್ರಾಮಾಂತರ ರಸ್ತೆಗಳು ಹಾಳಾಗಿ ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿರುವುದಿಲ್ಲವೆ,

ಇ) ಹಾಗಿದ್ದಲ್ಲಿ, ಸಂಬಂಧಿಸಿದ ಇಲಾಖೆಗಳು ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮುಖ್ಯಮಂತ್ರಿಗಳು)

ಅ) ಸರ್ಕಾರದ ಗಮನಕ್ಕೆ ಬಂದಿದೆ

ಆ) ಮರಳು ಸಾಗಾಣಿಕೆ ಲಾರಿಗಳು ಓವರ್‌ಲೋಡ್ ಹಾಕಿಕೊಂಡು ಸಂಚರಿಸುವುದರಿಂದ ಗ್ರಾಮಾಂತರ ರಸ್ತೆಗಳು ಹಾಳಾಗುತ್ತಿರುವುದು ಹಾಗೂ ಕೆಲವು ಸಾರ್ವಜನಿಕರು ಈ ಬಗ್ಗೆ ದೂರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ

ಇ) ಅನಧಿಕೃತ ಮರಳು ಗಣಿಗಾರಿಕೆಯನ್ನು ನಿಯಂತ್ರಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ ಸಿಐ 05 ಎಂಎಂಎನ್ 2005, ದಿನಾಂಕ 6–8–2005ರಲ್ಲಿ ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿಯನ್ನು ರಚಿಸಿದೆ ಈ ಸಮಿತಿಯಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪೊಲೀಸ್ ಅಧಿಕಾರಿಗಳು, ಪ್ರಾದೇಶಿಕ ಸಾರಿಗೆ ಅಧಿಕಾರಿ, ಸಂಬಂಧಪಟ್ಟ ತಹಶೀಲ್ದಾರ್ ಮತ್ತು ಜಿಲ್ಲೆಯ ಹಿರಿಯ ಭೂವಿಜ್ಞಾನಿ/ಉಪ ನಿರ್ದೇಶಕರು ಸದಸ್ಯರಾಗಿರುತ್ತಾರೆ ಅಂತೆಯೇ ಅಕ್ರಮ ಗಣಿಗಾರಿಕೆ/ಅನಧಿಕೃತ ಸಾಗಾಣಿಕೆ ತಡೆಗಟ್ಟಲು ರಾಜ್ಯ ಮಟ್ಟದಲ್ಲಿ, ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಹಾಗೂ ಜಿಲ್ಲಾ ಮಟ್ಟದಲ್ಲಿ ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಟಾಸ್ಕ್‌ಫೋರ್ಸ್ ಸಮಿತಿಗಳನ್ನು ಸಹ ರಚಿಸಲಾಗಿದೆ ಅನಧಿಕೃತವಾಗಿ ಮರಳು ಸಾಗಾಣಿಕೆ ಮಾಡುವ ಲಾರಿಗಳನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳು ತಪಾಸಣೆ ನಡೆಸಿ, 22 ಪ್ರಕರಣಗಳಲ್ಲಿ ದೂರು ದಾಖಲಿಸಲಾಗಿದೆ ಹಾಗೂ ರೂ 20 63 ಲಕ್ಷಗಳನ್ನು ದಂಡದ ರೂಪದಲ್ಲಿ ವಸೂಲಿ ಮಾಡಲಾಗಿದೆ ಜಿಲ್ಲಾ